# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 895 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 28.09.2020 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಔರಾದ, ಬಸವಕಲ್ಯಾಣ, ಭಾಲ್ಕಿ, ಹುಮನಾಬಾದ್ ತಾಲ್ಲೂಕುಗಳಲ್ಲಿ ಹೆಚ್ಚಿನ ಸಂಖ್ಯೆಯ ಅಲೆಮಾರಿ ಜನಾಂಗವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಜನಾಂಗದ ಮೂಲಭೂತ ಸೌಕರ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು). | ಹೌದು<br><br>ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯ ಈ ಕೆಳಕಂಡ ತಾಲ್ಲೂಕುಗಳ ಗ್ರಾಮ/ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ಕ್ರ.ಸಂ. / ತಾಲ್ಲೂಕು / ಕಾಮಗಾರಿಗಳ ಸಂಖ್ಯೆ<br>1) / ಔರಾದ / 1<br>2) / ಬಸವಕಲ್ಯಾಣ / 5<br>3) / ಭಾಲ್ಕಿ / 3<br>4) / ಬೀದರ್ / 6<br>5) / ಹುಮನಾಬಾದ್ / 19<br>ಒಟ್ಟು / 34<br><br>ಮುಂದುವರೆದು, ಅಲೆಮಾರಿ ಜನಾಂಗದವರಿಗೆ ನಿವೇಶನ ಒದಗಿಸಲು ಔರಾದ ಪಟ್ಟಣದ ಸರ್ವೆ ನಂ.183ರಲ್ಲಿ 2 ಎಕರೆ ಮತ್ತು ಬೀದರ್ ತಾಲ್ಲೂಕಿನ ಗೊರನ್ನಳ್ಳಿ ಸರ್ವೆ ನಂ. 27 ಮತ್ತು 28ರಲ್ಲಿ 2 ಎಕರೆ ಜಮೀನನ್ನು ನಗರಸಭೆಯಿಂದ ಪಡೆಯಲು ಕ್ರಮವಹಿಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಆ) | ಜಿಲ್ಲೆಯಲ್ಲಿ ಈ ಜನರಿಗಾಗಿ ವಸತಿ ಸೌಲಭ್ಯ ಒದಗಿಸುವುದು ಸರ್ಕಾರದ ಧ್ಯೇಯವಾಗಿದ್ದು, ಇಲ್ಲಿಯವರೆಗೆ ಅವರ ಅಭಿವೃದ್ಧಿಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು; ಇದಕ್ಕೆ ಯಾರು ಹೊಣೆಗಾರರು? | ಅಲೆಮಾರಿ ಹಾಗೂ ಅರೆಅಲೆಮಾರಿ ಜನಾಂಗದವರಿಗೆ ವಸತಿ ಸೌಲಭ್ಯ ಒದಗಿಸಲು 2017-18ನೇ ಸಾಲಿನಲ್ಲಿ 102 ಮನೆಗಳು ಮತ್ತು 2019-20ನೇ ಸಾಲಿನಲ್ಲಿ 515 ಮನೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆ ಆಧರಿಸಿ ಅಲೆಮಾರಿ ಸಮುದಾಯದವರಿಗೆ ವಸತಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ. |

ಸಂಖ್ಯೆ:ಹಿಂವಕ 562 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ